13

ಕರ್ನಾಟಕ ವಿಧಾನ ಸಭೆ, ಸಂಶೋಧನಾ ಹಾಗೂ ಉಲ್ಲೇಖನಾ ಶಾಖೆ

**KARNATAKA LEGISLATIVE ASSEMBLY, RESEARCH AND REFERENCE BRANCH**

ಪತ್ರಿಕಾ ತುಣುಕುಗಳು

**PAPER CLIPPINGS**

ಇಲಾಖೆ / ವಿಷಯ : DEPARTMENT / SUBJECT: ______

ಪತ್ರಿಕೆಯ ಹೆಸರು : NAME OF THE NEWS PAPER: ಕನ್ನಡ ಪ್ರಭ    ದಿನಾಂಕ : DATE : 25/9/2020

# ಆಂಜನೇಯ ಆರೋಪ ಸುಳ್ಳು: ಚವ್ಹಾಣ್

## ನಾನು ನೀಡಿದ ಜಾತಿ, ವಾಸ ಸ್ಥಳದ ಮಾಹಿತಿ ಸರಿಯಾಗಿದೆ: ಸಚಿವ

• **ಕನ್ನಡಪ್ರಭ ವಾರ್ತೆ** ಬೆಂಗಳೂರು

ನನ್ನ ಜಾತಿ ಮತ್ತು ಜನ್ಮ ಸ್ಥಳದ ಕುರಿತು ಸಮಾಜಕಲ್ಯಾಣ ಇಲಾಖೆಯ ಮಾಜಿ ಸಚಿವ ಎಚ್. ಆಂಜನೇಯ ಅವರು ಮಾಡಿರುವ ಆರೋಪ ಸಾಬೀತಾದರೆ ರಾಜಕೀಯ ನಿವೃತ್ತಿ ತೆಗೆದುಕೊಳ್ಳುವುದಾಗಿ ತಿಳಿಸಿರುವ ಪಶುಸಂಗೋಪನೆ ಸಚಿವ ಪ್ರಭು ಚವ್ಹಾಣ್, ಒಂದು ವೇಳೆ ಆರೋಪ ಸುಳ್ಳು ಎಂಬುದಾಗಿ ಸಾಬೀತಾದರೆ ಬಹಿರಂಗವಾಗಿ ಕ್ಷಮೆ ಕೋರಲಿ ಎಂದು ಸವಾಲು ಹಾಕಿದ್ದಾರೆ.



ಆಂಜನೇಯ ಅವರು ಮಾಡಿರುವ ಆರೋಪಗಳು ನಿರಾಧಾರ ಹಾಗೂ ಸತ್ಯಕ್ಕೆ ದೂರವಾಗಿವೆ. ಅವರಿಗೆ ನನ್ನ ಜಾತಿ, ಜನ್ಮದ ಮೂಲದ ಬಗ್ಗೆ ತಿಳಿಯಬೇಕಿದ್ದರೆ ಒಮ್ಮೆ ನನ್ನ ಕ್ಷೇತ್ರಕ್ಕೆ ಬಂದು ಸ್ವತಃ ವಾಸ್ತವ ಏನೆಂಬುದು ತಿಳಿದುಕೊಳ್ಳಲಿ. ನಾನು ಸುಳ್ಳು, ಮೋಸದಿಂದ ಜಾತಿ, ಜನ್ಮ ಪ್ರಮಾಣಪತ್ರ ಪಡೆದಿರುವುದು ಸಾಬೀತಾದರೆ ಅದೇ ಕ್ಷಣ ರಾಜಕೀಯದಿಂದ ನಿವೃತ್ತಿ ಪಡೆಯುವೆ ಎಂದು ಹೇಳಿದ್ದಾರೆ.

ನಾನು ಮೂಲತಃ ಕರ್ನಾಟಕದವನು. ನಾನು ಅಪ್ಪಟ ಕನ್ನಡಿಗ. ಬೀದರ್ ಜಿಲ್ಲೆಯ ಔರಾದ್ ತಾಲೂಕಿನ ಬೋಂತಿ ತಾಂಡಾ ನನ್ನ ಹುಟ್ಟೂರು. ನಾನು ಪರಿಶಿಷ್ಟ ಜಾತಿಯ (ಎಸ್‌ಸಿ) ಲಂಬಾಣಿ ಜನಾಂಗಕ್ಕೆ ಸೇರಿದ್ದೇನೆ. ಆದರೆ, ಆಂಜನೇಯ ಅವರು ವಾಸ್ತವ ಅರಿಯದೆ ಹಾಗೂ ಯಾರೋ ಕುತಂತ್ರಿಗಳು ನೀಡಿದ ಸುಳ್ಳು ಮಾಹಿತಿಯನ್ನು ನಂಬಿ ಆರೋಪ ಮಾಡಿದ್ದಾರೆ. ಪರಿಶಿಷ್ಟ ಸಮಾಜದ ಹಿರಿಯ ನಾಯಕರೆನಿಸಿಕೊಂಡ ಆಂಜನೇಯ ಅವರಿಂದ ಇಂತಹ ತಪ್ಪು ಹೇಳಿಕೆ ಅಚ್ಚರಿ ತಂದಿದೆ ಎಂದಿದ್ದಾರೆ.

ನನ್ನ ಜಾತಿ ಹಾಗೂ ಜನ್ಮ ಸ್ಥಳದ ಕುರಿತು ಯಾವುದೇ ವಿವಾದವಿಲ್ಲ. ಆದರೆ ಕೆಲವರು ಮೇಲಿಂದ ಮೇಲೆ ಈ ವಿಷಯವನ್ನು ಕೆದಕಿ ಅನಗತ್ಯ ಗೊಂದಲ ಸೃಷ್ಟಿಸುವ ಕೆಲಸ ಮಾಡುತ್ತಿದ್ದಾರೆ. 2008ರಲ್ಲಿ ನಾನು ಮೊದಲ ಸಲ ಔರಾದ್ ವಿಧಾನಸಭೆ ಕ್ಷೇತ್ರದಿಂದ ಸ್ಪರ್ಧೆ ಮಾಡುವ ಸಂದರ್ಭದಲ್ಲಿ ಕೆಲವರು ನನ್ನ ಜಾತಿ, ಜನ್ಮಸ್ಥಳದ ಬಗ್ಗೆ ಆಕ್ಷೇಪ ಎತ್ತಿದ್ದರು. ಆಗಿನ ಜಿಲ್ಲಾಧಿಕಾರಿ ಹಾಗೂ ಜಿಲ್ಲಾ ಚುನಾವಣಾಧಿಕಾರಿ ಆಗಿದ್ದ ಹರ್ಷ ಗುಪ್ತಾ ಅವರು ಅಧಿಕಾರಿಗಳಿಂದ ಈ ಬಗ್ಗೆ ತನಿಖೆ ನಡೆಸಿದ್ದರು. ಸ್ಥಳಪರಿಶೀಲನೆ, ಅಗತ್ಯ ದಾಖಲಾತಿ ಪರಿಶೀಲನೆ ಬಳಿಕ ಎಸ್‌ಸಿ ಪ್ರಮಾಣಪತ್ರ ವಿತರಿಸಿ, ಎಲ್ಲ ಆಕ್ಷೇಪಗಳನ್ನು ತಳ್ಳಿ ಹಾಕಿದ್ದರು. ಇದಾದ ಬಳಿಕ 2009ರಲ್ಲಿ ಬಾಬು ತಾರೆ ಎಂಬುವರು ಹೈಕೋರ್ಟ್‌ನಲ್ಲಿ ಪ್ರಶ್ನಿಸಿದ್ದರು. ವಿಚಾರಣೆಯ ನಂತರ ಹೈಕೋರ್ಟ್ ಅವರ ಅರ್ಜಿಯನ್ನು ತಿರಸ್ಕರಿಸಿದೆ ಎಂದು ತಿಳಿಸಿದ್ದಾರೆ.